ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

File No:DTE-ADMI0ACM2/17/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:13-10-2020.

**-:: ಸುತ್ತೋಲೆ ::-**

**ವಿಷಯ:** 2020-21ನೇ ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಅನುಗುಣವಾದ ಕೋರ್ಸ್‌ಗಳ **ಪ್ರಥಮ ಸೆಮಿಸ್ಟರ್ ಸಂಜೆ ಡಿಪ್ಲೋಮಾ ಪ್ರವೇಶಕ್ಕೆ** ಸಂಬಂಧಿಸಿದಂತೆ ಭರ್ತಿ ಆಗದ ಉಳಿಕೆ ಸೀಟುಗಳಿಗೆ ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಸಮ ಸಂಖ್ಯೆ ಅಧಿಸೂಚನೆ ದಿನಾಂಕ:02-09-2020.
2. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ದಿ:22-09-2020.
3. ಪ್ರಾಂಶುಪಾಲರು, ಸರ್ಕಾರಿ ಎಸ್.ಜೆ(ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು ಇವರ ಪತ್ರ ಸಂ. ಎಸ್‌ಜೆಇಪಿ/01/ಪ್ರವೇಶ/2020, ದಿ:12-10-2020.

-ooooooooo-

2020-21ನೇ ಸಾಲಿನ **ಪ್ರಥಮ ಸೆಮಿಸ್ಟರ್ ಸಂಜೆ ಡಿಪ್ಲೋಮಾ ಪ್ರವೇಶಕ್ಕೆ** ಸಂಬಂಧಿಸಿದಂತೆ, ಉಲ್ಲೇಖ(3)ರ ಪ್ರಿನ್ಸಿಪಾಲರ ಪತ್ರದಲ್ಲಿ ಬಾಕಿ ಉಳಿದಿರುವ ಸೀಟುಗಳನ್ನು ಭರ್ತಿ ಮಾಡಲು ಅಭ್ಯರ್ಥಿಗಳಿಂದ ಪ್ರವೇಶದ ಅವಧಿಯನ್ನು ವಿಸ್ತರಿಸಬೇಕೆಂದು ಕೋರಿರುತ್ತಾರೆ. ಈ ಸಂಬಂಧದಲ್ಲಿ ಪ್ರಿನ್ಸಿಪಾಲರ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಪಡೆದು ನಿಯಮಗಳ ಪ್ರಕಾರ **ದಿ:29-10-2020 ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಪ್ರವೇಶ ಪ್ರಕ್ರಿಯೆ ಪೂರ್ಣಗೊಳಿಸಲು ಪ್ರವೇಶಾವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

**ಭರ್ತಿ ಆಗದ ಉಳಿಕೆ ಸೀಟುಗಳಿಗೆ ಮಾತ್ರ ಅನ್ವಯವಾಗುವಂತೆ ಪ್ರವೇಶ ಬಯಸಿ ಮೊದಲು ಬಂದವರಿಗೆ ಮೊದಲ ಆಧ್ಯತೆ ನೀಡಿ ಆಯಾ ದಿನವೇ ಸಾಮಾನ್ಯ ವರ್ಗದಡಿ ಆಫ್-ಲೈನ್ ಮುಖಾಂತರ ಸೀಟು ಹಂಚಿಕೆ ಮಾಡಿ, ನಿಗಧಿತ ಪ್ರವೇಶ ಶುಲ್ಕವನ್ನು ಪಾವತಿಸಿಕೊಂಡು ಪ್ರವೇಶ ನೀಡುವುದು.**

ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಪ್ರಯುಕ್ತ, ಇದನ್ನು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಕೋವಿಡ್-19 ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

**ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.**

**ನಿರ್ದೇಶಕರು**

**ಇವರಿಗೆ,**

01 ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು
02 ಪ್ರಿನ್ಸಿಪಾಲರು, ಎಂ.ಇ.ಐ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು
03 ಪ್ರಿನ್ಸಿಪಾಲರು, ಕರ್ನಾಟಕ ಸರ್ಕಾರಿ (ಸಂಜೆ) ಪಾಲಿಟೆಕ್ನಿಕ್, ಮಂಗಳೂರು

} ಸೀಟು ಆಯ್ಕೆ ಪ್ರಕ್ರಿಯೆಯನ್ನು ತಮ್ಮ ಸಂಸ್ಥೆಯಲ್ಲಿಯೇ ನಡೆಸುವ ಬಗ್ಗೆ ತಮ್ಮ ಹಂತದಲ್ಲಿಯೇ ಕ್ರಮ ತೆಗೆದುಕೊಂಡು ನಿಯಮಗಳ ಪ್ರಕಾರ ಪ್ರವೇಶ ನಡೆಸುವಲ್ಲಿ ಸೂಕ್ತ ವ್ಯವಸ್ಥೆ ಮಾಡಿ ನಿರ್ದೇಶನಾಲಯಕ್ಕೆ ಮಾಹಿತಿ ನೀಡುವುದು. ಹಾಗೂ ಈ ಬಗ್ಗೆ ಪ್ರತ್ಯೇಕ ಮಾರ್ಗಸೂಚಿಯನ್ನು ವಿದ್ಯಾರ್ಥಿಗಳಿಗೆ ತಮ್ಮ ಸಂಸ್ಥೆಯಲ್ಲಿಯೇ ನೀಡುವುದು. ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲೂ ಸಹ ಪ್ರಕಟಿಸುವುದು

<u>ಪ್ರತಿ ಮಾಹಿತಿಗಾಗಿ:–</u>

1. ಮಾನ್ಯ ಆಯುಕ್ತರವರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರವರ ಆಪ್ತಶಾಖೆಗೆ
3. ಜಂಟಿ ನಿರ್ದೇಶಕರು(ಆಡಳಿತ), ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಸಾರ್ವಜನಿಕ ಸಂಪರ್ಕಾಧಿಕಾರಿ, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ–ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಎಸ್.ಟಿ.ಎಲ್ ಮತ್ತು ಡಿವಿಪಿ(2) ವಿಭಾಗಕ್ಕೆ.
8. ಕಛೇರಿ ಪ್ರತಿ.